**All India Radio: Bangalore**
**National Bulletin In Kannada**
**04.05.2026 19.35 p.m.**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**04.05.2026 19.35 p.m.**

ಮುಖ್ಯಾಂಶಗಳು

೧. ಪಶ್ಚಿಮ ಬಂಗಾಳದಲ್ಲಿ ಭಾರೀ ಮುನ್ನಡೆಯೊಂದಿಗೆ ಐತಿಹಾಸಿಕ ಗೆಲುವಿನತ್ತ ಬಿಜೆಪಿ

೨. ತಮಿಳುನಾಡಿನಲ್ಲಿ ವಿಜಯ ಪತಾಕೆ ಹಾರಿಸಿದ ನಟ ವಿಜಯ್ ನೇತೃತ್ವದ ಟಿವಿಕೆ

೩. ಕಾಂಗ್ರೆಸ್ ನೇತೃತ್ವದ ಯುಡಿಎಫ್ 'ಕೈ'ಹಿಡಿದ ಕೇರಳಂ ಮತದಾರರು

೪. ಆಡಳಿತರೂಢ ಎನ್‌ಡಿಎ ತೆಕ್ಕೆಯಲ್ಲಿ ಅಸ್ಸಾಂ, ಪುದುಚೇರಿ ಭದ್ರ

೫. ದಾವಣಗೆರೆ ದಕ್ಷಿಣ, ಬಾಗಲಕೋಟೆ ಕ್ಷೇತ್ರಗಳನ್ನು ತನ್ನಲ್ಲೇ ಉಳಿಸಿಕೊಂಡ ಕಾಂಗ್ರೆಸ್

---

ಇಂದು ನಾಲ್ಕು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆಗಳ ಮತ ಎಣಿಕೆ ಕಾರ್ಯ ಮುಂದುವರೆದಿವೆ.

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಐತಿಹಾಸಿಕ ಗೆಲುವಿನತ್ತ ಸಾಗುತ್ತಿದ್ದರೆ, ಅಸ್ಸಾಂ ಮತ್ತು ಪುದುಚೇರಿಯಲ್ಲಿ ಆಡಳಿತರೂಢ ಎನ್‌ಡಿಎ ಮೈತ್ರಿಕೂಟ ಭಜರಿ ಗೆಲುವಿನತ್ತ ಮುನ್ನಡೆದಿದೆ.

ತಮಿಳುನಾಡಿನಲ್ಲಿ, ನಟ ಮತ್ತು ರಾಜಕಾರಣಿ ವಿಜಯ್ ಅವರ ಪಕ್ಷ ಟಿವಿಕೆ ಚೊಚ್ಚಲ ಪ್ರಯತ್ನದಲ್ಲಿ ವಿಜಯ ಪತಾಕೆ ಹಾರಿಸಿದ್ದಾರೆ. ಕೇರಳದಲ್ಲಿ, ಕಾಂಗ್ರೆಸ್ ನೇತೃತ್ವದ ಯುಡಿಎಫ್ ಗೆಲುವಿನ ಹಾದಿಯಲ್ಲಿದೆ.

ವಿಧಾನಸಭಾ ಉಪಚುನಾವಣೆಯಲ್ಲಿ, ಗುಜರಾತ್, ತ್ರಿಪುರ ಮತ್ತು ನಾಗಾಲ್ಯಾಂಡ್‌ನಲ್ಲಿ ಬಿಜೆಪಿ ತಲಾ ಒಂದು ಸ್ಥಾನವನ್ನು ಗೆದ್ದಿದ್ದರೆ, ಕರ್ನಾಟಕದಲ್ಲಿ ಎರಡು ಸ್ಥಾನಗಳನ್ನು ಕಾಂಗ್ರೆಸ್ ಗೆದ್ದಿದೆ.

ಪಶ್ಚಿಮ ಬಂಗಾಳದಲ್ಲಿ, ಒಟ್ಟು ೨೯೩ ವಿಧಾನಸಭಾ ಸ್ಥಾನಗಳಲ್ಲಿ, ಇದುವರೆಗೆ ೯೪ ಕ್ಷೇತ್ರಗಳಿಗೆ ಫಲಿತಾಂಶಗಳನ್ನು ಘೋಷಿಸಲಾಗಿದೆ. ಬಿಜೆಪಿ ೬೩ ಸ್ಥಾನಗಳನ್ನು ಗೆದ್ದಿದ್ದರೆ, ತೃಣಮೂಲ ಕಾಂಗ್ರೆಸ್ ೨೮ ಸ್ಥಾನಗಳನ್ನು ಗೆದ್ದಿದೆ. ಬಿಜೆಪಿ ೧೪೧ ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದ್ದರೆ, ತೃಣಮೂಲ ಕಾಂಗ್ರೆಸ್ ೫೫ ಸ್ಥಾನಗಳಲ್ಲಿ, ಸಿಪಿಎಂ ೧ ರಲ್ಲಿ, ಮತ್ತು ಇತರರು ೩ ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ. ಕಾಂಗ್ರೆಸ್ ೧ ಸ್ಥಾನದಲ್ಲಿ ಗೆದ್ದಿದ್ದು, ಮತ್ತೊಂದು ಸ್ಥಾನದಲ್ಲಿ ಮುನ್ನಡೆ ಸಾಧಿಸಿದೆ.

ಮುಖ್ಯಮಂತ್ರಿ ಮತ್ತು ಟಿಎಂಸಿ ನಾಯಕಿ ಮಮತಾ ಬ್ಯಾನರ್ಜಿ ಭಬಾನಿಪುರ ಕ್ಷೇತ್ರದಲ್ಲಿ ಮುನ್ನಡೆ ಸಾಧಿಸಿದ್ದರೆ, ನಂದಿಗ್ರಾಮ್ ಕ್ಷೇತ್ರದಲ್ಲಿ ಬಿಜೆಪಿ ನಾಯಕ ಸುವೇಂದು ಅಧಿಕಾರಿ ಮುನ್ನಡೆಯಲ್ಲಿದ್ದಾರೆ.

ಎಜೆಯುಪಿ ಪಕ್ಷದ ಮುಖ್ಯಸ್ಥ ಹುಮಾಯೂನ್ ಕಬೀರ್ ಅವರು ನೌಡಾ ಮತ್ತು ರೆಜಿನಗರ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ.

ಆಡಳಿತಾರೂಢ ಬಿಜೆಪಿ ಅಸ್ಸಾಂನಲ್ಲಿ ಅಧಿಕಾರವನ್ನು ಉಳಿಸಿಕೊಳ್ಳಲು ಸಜ್ಜಾಗಿದ್ದು, ಐತಿಹಾಸಿಕ ಮೂರನೇ ಅವಧಿಗೆ ಅಧಿಕಾರ ಹಿಡಿಯಲಿದೆ. ಒಟ್ಟು ೧೨೬ ವಿಧಾನಸಭಾ ಸ್ಥಾನಗಳಲ್ಲಿ, ಇಲ್ಲಿಯವರೆಗೆ ೮೭ ಕ್ಷೇತ್ರಗಳಿಗೆ ಫಲಿತಾಂಶಗಳನ್ನು ಘೋಷಿಸಲಾಗಿದೆ. ಬಿಜೆಪಿ ೬೭ ಸ್ಥಾನಗಳಲ್ಲಿ ವಿಜೇತವಾಗಿದೆ. ಮಿತ್ರ ಪಕ್ಷಗಳಾದ ಅಸ್ಸೋಮ್ ಗಣ ಪರಿಷತ್-ಎಜಿಪಿ ೫ ಸ್ಥಾನಗಳನ್ನು ಗೆದ್ದಿದ್ದು, ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್-ಬಿಪಿಎಫ್ ೭ ಸ್ಥಾನಗಳನ್ನು ಗಳಿಸಿದೆ.

ಕಾಂಗ್ರೆಸ್ ಏಳು ಸ್ಥಾನಗಳನ್ನು ಗಳಿಸಿದರೆ, ಆಲ್ ಇಂಡಿಯಾ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್-ಎಐಯುಡಿಎಫ್, ರೈಜೋರ್ ದಳ ಮತ್ತು ಟಿಎಂಸಿ ತಲಾ ಒಂದು ಸ್ಥಾನದಲ್ಲಿ ಜಯ ಸಾಧಿಸಿವೆ.

ಜೋರ್ಹತ್ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಹಿತೇಂದ್ರ ನಾಥ್ ಗೋಸ್ವಾಮಿ ಅವರು, ಅಸ್ಸಾಂ ಕಾಂಗ್ರೆಸ್ ಅಧ್ಯಕ್ಷ ಗೌರವ್ ಗೊಗೊಯ್ ಅವರನ್ನು ಸೋಲಿಸಿದ್ದಾರೆ. ಅಸ್ಸಾಂ ಕೃಷಿ ಸಚಿವ ಮತ್ತು

ಎಜಿಪಿ ನಾಯಕ ಅತುಲ್ ಬೋರಾ, ಬೊಕಾಖಾಟ್ ವಿಧಾನಸಭಾ ಕ್ಷೇತ್ರವನ್ನು ಉಳಿಸಿಕೊಂಡಿದ್ದಾರೆ. ರಾಜ್ಯ ಹಣಕಾಸು ಸಚಿವ ಅಜಂತಾ ನಿಯೋಗ್, ಸತತ ಆರನೇ ಅವಧಿಗೆ ಗೋಲಾಘಾಟ್ ವಿಧಾನಸಭಾ ಕ್ಷೇತ್ರದಲ್ಲಿ ಗೆಲುವು ಸಾಧಿಸಿದ್ದಾರೆ.

ಉಳಿದ ೩೯ ಸ್ಥಾನಗಳಿಗೆ ಲಭ್ಯವಿರುವ ಮಾಹಿತಿಗಳ ಪ್ರಕಾರ, ಬಿಜೆಪಿ ೧೫ ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದ್ದು, ಮಿತ್ರ ಪಕ್ಷ - ಎಜಿಪಿ ೫ ಮತ್ತು ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್ ೩ ರಲ್ಲಿ ಮುನ್ನಡೆಯಲ್ಲಿದೆ.

ಕಾಂಗ್ರೆಸ್ ೧೨ ಸ್ಥಾನಗಳಲ್ಲಿ, ಎಐಯುಡಿಎಫ್ ೧ ರಲ್ಲಿ ಮುನ್ನಡೆ ಸಾಧಿಸಿದ್ದಾರೆ. ಇದೇ ವೇಳೆ ರೈಜೋರ್ ದಳ ಮತ್ತು ಎಐಟಿಸಿ ತಲಾ ಒಂದು ಸ್ಥಾನ ಗಳಿಸಿವೆ. ಜಲುಕ್ಬರಿ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಮತ್ತು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಮ್ಮ ಸಮೀಪದ ಪ್ರತಿಸ್ಪರ್ಧಿ ಕಾಂಗ್ರೆಸ್ ನ ಬಿದಿಶಾ ನಿಯೋಗ್ ವಿರುದ್ಧ ಗೆಲುವು ಸಾಧಿಸಿದ್ದಾರೆ.

ಕೇರಳದಲ್ಲಿ, ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ ಗೆಲುವಿನ ಹಾದಿಯಲ್ಲಿದೆ. ಒಟ್ಟು ೧೪೦ ಸ್ಥಾನಗಳ ಪೈಕಿ, ಕಾಂಗ್ರೆಸ್ ೬೩ ಸ್ಥಾನಗಳನ್ನು ಗೆದ್ದಿದೆ. ಕಾಂಗ್ರೆಸ್ ಮಿತ್ರ ಪಕ್ಷ ಐಯುಎಂಎಲ್ ೨೫ ಸ್ಥಾನಗಳನ್ನು ಗೆದ್ದಿದ್ದು, ೦೧ ಸ್ಥಾನದಲ್ಲಿ ಮುನ್ನಡೆ ಸಾಧಿಸಿದೆ. ಆಡಳಿತಾರೂಢ ಸಿಪಿಎಂ ೨೫ ಸ್ಥಾನಗಳನ್ನು ಗೆದ್ದಿದ್ದು, ೦೧ ಸ್ಥಾನದಲ್ಲಿ ಮುನ್ನಡೆಯಲ್ಲಿದೆ. ಅದರ ಮಿತ್ರ ಪಕ್ಷ ಸಿಪಿಐ ೮ ಸ್ಥಾನಗಳನ್ನು ಗೆದ್ದಿದೆ. ಕೇರಳ ಕಾಂಗ್ರೆಸ್ ೭ ಸ್ಥಾನಗಳಲ್ಲಿ ಜಯ ಸಾಧಿಸಿದೆ.

ಮುಖ್ಯಮಂತ್ರಿ ಮತ್ತು ಸಿಪಿಐಎಂ ನಾಯಕ ಪಿಣರಾಯಿ ವಿಜಯನ್, ಧರ್ಮಡಂ ಕ್ಷೇತ್ರದಲ್ಲಿ ಹತ್ತೊಂಬತ್ತು ಸಾವಿರಕ್ಕೂ ಹೆಚ್ಚು ಮತಗಳಿಂದ ಗೆದ್ದಿದ್ದಾರೆ. ಕೇಂದ್ರ ಮಾಜಿ ಸಚಿವ ಮತ್ತು ಬಿಜೆಪಿ ರಾಜ್ಯಾ ಅಧ್ಯಕ್ಷ ರಾಜೀವ್ ಚಂದ್ರಶೇಖರ್, ನೇಮಮ್ ಕ್ಷೇತ್ರದಲ್ಲಿ ನಾಲ್ಕು ಸಾವಿರದ ೯೭೮ ಮತಗಳಿಂದ ಜಯ ಸಾಧಿಸಿದ್ದಾರೆ.

ನಟ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ-ಟಿವಿಕೆ, ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಏಕೈಕ ದೊಡ್ಡ ಪಕ್ಷವಾಗಿ ಹೊರಹೊಮ್ಮುವ ಮೂಲಕ ಇತಿಹಾಸ ಸೃಷ್ಟಿಸಲು

ಸಜ್ಜಾಗಿದೆ. ರಾಜ್ಯಾದ್ಯಂತ ೨೩೪ ಕ್ಷೇತ್ರಗಳ ಪೈಕಿ, ಟಿವಿಕೆ ೫೯ ಸ್ಥಾನಗಳಲ್ಲಿ ಮುನ್ನಡೆಯಲ್ಲಿದೆ ಮತ್ತು  ೪೯ ಸ್ಥಾನಗಳನ್ನು ಗೆದ್ದಿದೆ.

ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ನೇತೃತ್ವದ ಆಡಳಿತಾರೂಢ ದ್ರಾವಿಡ ಮುನ್ನೇತ್ರ ಕಳಗಂ-ಡಿಎಂಕೆ ೩೮ ಸ್ಥಾನಗಳಲ್ಲಿ ಮುನ್ನಡೆಯಲ್ಲಿದ್ದು, ೨೨ ಸ್ಥಾನಗಳನ್ನು ಗೆದ್ದಿದೆ. ಇದೇ ವೇಳೆ ಅಖಿಲ ಭಾರತ ಅಣ್ಣಾ ದ್ರಾವಿಡ ಮುನ್ನೇತ್ರ ಕಳಗಂ-ಎಐಎಡಿಎಂಕೆ ೨೫ ಸ್ಥಾನಗಳಲ್ಲಿ ಮುನ್ನಡೆಯಲ್ಲಿದ್ದು, ೨೦ ಸ್ಥಾನಗಳನ್ನು ಗೆದ್ದಿದೆ.

ಪಿಎಂಕೆ ಮೂರು ಸ್ಥಾನಗಳಲ್ಲಿ ಮುನ್ನಡೆಯಲ್ಲಿದ್ದು, ಎರಡು ಸ್ಥಾನಗಳನ್ನು ಗೆದ್ದಿದೆ. ಭಾರತೀಯ ರಾಷ್ಟ್ರೀಯ ಕಾಂಗ್ರೆಸ್-ಐಎನ್‌ಸಿ ನಾಲ್ಕು ಸ್ಥಾನಗಳಲ್ಲಿ ಮುಂದಿದ್ದು, ಒಂದು ಸ್ಥಾನವನ್ನು ಗೆದ್ದಿದೆ. ಬಿಜೆಪಿ ಒಂದು ಸ್ಥಾನದಲ್ಲಿ ಮುನ್ನಡೆ ಸಾಧಿಸಿದ್ದರೆ, ಇತರರು ಹತ್ತು ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ.

ಪ್ರಮುಖ ಅಭ್ಯರ್ಥಿಗಳಲ್ಲಿ, ಹಾಲಿ ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್, ೮ ಸಾವಿರದ ೭೯೫ ಮತಗಳಿಂದ ತಮ್ಮ ಸಮೀಪದ ಅಭ್ಯರ್ಥಿ ಟಿವಿಕೆ ಪಕ್ಷದ ವಿ.ಎಸ್.ಬಾಬು ಅವರ ವಿರುದ್ಧ ಪರಾಭವಗೊಂಡಿದ್ದಾರೆ. ಟಿವಿಕೆ ಮುಖ್ಯಸ್ಥ ವಿಜಯ್  ಪೆರಂಬೂರು ಕ್ಷೇತ್ರದಲ್ಲಿ ೪೯ ಸಾವಿರದ ೭೬೫ ಮತಗಳಿಂದ ಭರ್ಜರಿ ಗೆಲುವು ಸಾಧಿಸಿದ್ದಾರೆ.

ಪುದುಚೇರಿಯಲ್ಲಿ ಎನ್.ರಂಗಸ್ವಾಮಿ ಅವರ ಎ.ಐ.ಎನ್.ಆರ್.ಸಿ ನೇತೃತ್ವದ ಎನ್.ಡಿ.ಎ ಸರ್ಕಾರ ಮತ್ತೆ ಅಧಿಕಾರಕ್ಕೆ ಬರುವ ನಿರೀಕ್ಷೆಯಿದೆ. ಒಟ್ಟು ೩೦ ಸ್ಥಾನಗಳ ಪೈಕಿ ೨೬ ಸ್ಥಾನಗಳ ಫಲಿತಾಂಶಗಳು ಲಭ್ಯವಿವೆ. ಎನ್. ರಂಗಸ್ವಾಮಿ ಅವರ ಎ.ಐ.ಎನ್.ಆರ್.ಸಿ ೧೦ ಸ್ಥಾನಗಳನ್ನು ಗೆದ್ದು, ಎರಡು ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದೆ.

ಬಿಜೆಪಿ ಮೂರು ಸ್ಥಾನಗಳಲ್ಲಿ ಗೆದ್ದಿದ್ದು, ಒಂದು ಸ್ಥಾನದಲ್ಲಿ ಮುನ್ನಡೆ ಸಾಧಿಸಿದೆ. ಎ.ಐ.ಎ.ಡಿ.ಎಂ.ಕೆ ಮತ್ತು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ತಲಾ ಒಂದು ಸ್ಥಾನ ಗೆದ್ದಿದೆ. ಡಿ.ಎಂ.ಕೆ ಐದು ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ.

ಮುಖ್ಯಮಂತ್ರಿ ಎನ್. ರಂಗಸಾಮಿ ತಟ್ಟಂಚವಾಡಿ ಕ್ಷೇತ್ರದಿಂದ ಮರು ಆಯ್ಕೆಯಾಗಿದ್ದಾರೆ. ಬಿಜೆಪಿ ಅಭ್ಯರ್ಥಿ ಮತ್ತು ಗೃಹ ಸಚಿವ ಎ.ನಮಶಿವಾಯಂ ಕೂಡ ತಮ್ಮ ಕ್ಷೇತ್ರದಲ್ಲಿ ವಿಜಯ ಸಾಧಿಸಿದ್ದಾರೆ.

ಐದು ರಾಜ್ಯಗಳಾದ್ಯಂತ ಏಳು ಕ್ಷೇತ್ರಗಳಿಗೆ ನಡೆದ ವಿಧಾನಸಭಾ ಉಪಚುನಾವಣೆಯಲ್ಲಿ, ಗುಜರಾತ್, ತ್ರಿಪುರ ಮತ್ತು ನಾಗಾಲ್ಯಾಂಡ್‌ನಲ್ಲಿ ಬಿಜೆಪಿ ತಲಾ ಒಂದು ಸ್ಥಾನವನ್ನು ಗೆದ್ದಿದೆ ಮತ್ತು ಮಹಾರಾಷ್ಟ್ರದಲ್ಲಿ ಒಂದು ಸ್ಥಾನದಲ್ಲಿ ಮುನ್ನಡೆ ಸಾಧಿಸಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಎರಡು ಸ್ಥಾನಗಳನ್ನು ಗೆದ್ದಿದೆ. ಇದೇ ವೇಳೆ ಮಹಾರಾಷ್ಟ್ರದ ಬಾರಾಮತಿ ಕ್ಷೇತ್ರದಲ್ಲಿ ಹಾಲಿ ಉಪಮುಖ್ಯಮಂತ್ರಿಯಾಗಿರುವ ಎನ್‌ಸಿಪಿಯ ಸುನೇತ್ರಾ ಅಜಿತ್ ಪವಾರ್ ಎರಡು ಲಕ್ಷಕ್ಕೂ ಹೆಚ್ಚು ಮತಗಳಿಂದ ಗೆದ್ದಿದ್ದಾರೆ.

---

ದಾವಣಗೆರೆ ದಕ್ಷಿಣ ವಿಧಾನಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಮಲ್ಲಿಕಾರ್ಜುನ್ ಗೆಲುವು ಸಾಧಿಸಿದ್ದಾರೆ.

ಸಮರ್ಥ್ ಅವರು ೫ ಸಾವಿರ ೭೦೮ ಮತಗಳ ಅಂತರದಿಂದ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸ ಕರಿಯಪ್ಪ ಅವರನ್ನು ಪರಾಭವಗೊಳಿಸಿದ್ದಾರೆ. ಸಮರ್ಥ್ ಅವರು ೬೯ ಸಾವಿರದ ೫೭೮ ಮತಗಳನ್ನು ಗಳಿಸಿದರೆ, ಸಮೀಪದ ಪ್ರತಿಸ್ಪರ್ಧಿ ಬಿಜೆಪಿಯ ಶ್ರೀನಿವಾಸ ಟಿ. ದಾಸಕರಿಯಪ್ಪ ೬೩ ಸಾವಿರದ ೮೭೦ ಮತಗಳನ್ನು ಪಡೆದಿದ್ದಾರೆ.

ಎಸ್‌ಡಿಪಿಐ ಅಭ್ಯರ್ಥಿ ಅಫ್ಸರ್ ಕೊಡ್ಲಿಪೇಟೆ ೧೮ ಸಾವಿರದ ೯೭೫ ಮತಗಳೊಂದಿಗೆ ಮೂರನೇ ಸ್ಥಾನ ಗಳಿಸಿದ್ದಾರೆ.

---

ಬಾಗಲಕೋಟೆ ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ೨೧ ಸಾವಿರದ ೮೬೬ ಮತಗಳಿಂದ ಗೆಲುವು ಸಾಧಿಸಿದ್ದಾರೆ.

ಉಮೇಶ್ ಮೇಟಿ ಅವರಿಗೆ ೯೬ ಸಾವಿರದ ೯೪೧ ಮತಗಳು ಲಭಿಸಿವೆ. ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಅವರಿಗೆ ೭೬ ಸಾವಿರದ ೭೫ ಮತಗಳು ಲಭಿಸಿವೆ.

---

ರಾಜ್ಯದ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಸೇರಿದಂತೆ ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ಚುನಾವಣಾ ಫಲಿತಾಂಶ ಕುರಿತ ವಿಶ್ಲೇಷಣೆ ಇಂದು ರಾತ್ರಿ ೮ ಗಂಟೆಗೆ ಆಕಾಶವಾಣಿಯಲ್ಲಿ ಮೂಡಿಬರಲಿದೆ.

ಬೆಂಗಳೂರು ವಿಶ್ವವಿದ್ಯಾಲಯದ ರಾಜಕೀಯ ಶಾಸ್ತ್ರ ವಿಭಾಗದ ಮುಖ್ಯಸ್ಥರು ಹಾಗೂ ಪ್ರಾಧ್ಯಾಪಕರಾದ ಡಾ. ವೀಣಾದೇವಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಹಿರಿಯ ಪತ್ರಕರ್ತರಾದ ಕೆ.ಸಿ.ಶಿವರಾಂ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ.

---

ಮುಂಬೈ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿದೆ.

_______ ಮುಕ್ತಾಯ _______